ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಜ್ಯದಲ್ಲಿರುವ ಸಾವಯವ ಕೃಷಿ ಬೆಳೆಯ ಬಗ್ಗೆ

ಶ್ರೀ ಬಿ. ಕೆ. ಹರಿಪ್ರಸಾದ್(ವಿಧಾನಸಭೆಯಿಂದ ಚುನಾಯಿತರಾದವರು) -

1040 (1167) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಸಾವಯವ ಕೃಷಿ ಬೆಳೆ ಬೆಳೆಯುವ ಭೂಮಿಯ ವಿಸ್ತೀರ್ಣ ಎಷ್ಟು; ಇದರಲ್ಲಿ ಯಾವ ಯಾವ ಸಾವಯವ ಬೆಳೆಗಳಿಗೆ ಉತ್ತೇಜನ ನೀಡಲಾಗುತ್ತಿದೆ;

(ಆ) ಸಾವಯವ ಬೆಳೆಗಳನ್ನು ಬೆಳೆಯುವ ರೈತರಿಗೆ ಹಾಗೂ ಇತರೆ ಬೆಳೆಗಳನ್ನು ಬೆಳೆಯುವ ರೈತರಿಗೆ ನೀಡುವ ಪ್ರೋತ್ಸಾಹ/ಸಹಾಯ ಧನಗಳಲ್ಲಿ ವ್ಯತ್ಯಾಸವಿದೆಯೇ; ಹಾಗಿದ್ದಲ್ಲಿ, ಕಾರಣಗಳೇನು; (ವಿವರ ನೀಡುವುದು)

(ಇ) ಶೂನ್ಯ ಬಂಡವಾಳ ಹಾಗೂ ಸಹಜ ಕೃಷಿ ಬೆಳೆ ಪದ್ಧತಿಯಲ್ಲಿ ಬೆಳೆಯುವ ಬೆಳೆಗಳ ಭೂಮಿಯ ವಿಸ್ತೀರ್ಣ ಹಾಗೂ ಉತ್ಪಾದಕತೆ ಎಷ್ಟು; ಸಾಮಾನ್ಯ ಬೇಸಾಯ ಹಾಗೂ ಶೂನ್ಯ ಬಂಡವಾಳ ಸಹಜ ಕೃಷಿ ಪದ್ಧತಿಗೆ ಉತ್ಪಾದಕತೆಯಲ್ಲಿರುವ ವ್ಯತ್ಯಾಸವೇನು;

(ಈ) ಸಾವಯುವ ಹಾಗೂ ಶೂನ್ಯ ಬಂಡವಾಳ ಸಹಜ ಕೃಷಿ ಪದ್ಧತಿ ಬೇಸಾಯ ಮಾಡುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಪ್ರತ್ಯೇಕ ಪಟ್ಟಿಯನ್ನು ನೀಡುವುದು)

(ಉ) ಈ ಎರಡು ಪದ್ಧತಿಗಳಿಗೆ 2020-21ರಲ್ಲಿ ನಿಗದಿಪಡಿಸಿದ ಅನುದಾನವೆಷ್ಟು; ಎಷ್ಟು ಖರ್ಚಾಗಿದೆ? (ವಿವರ ನೀಡುವುದು)